ಅಸಲು ದಾವಾ ಸಂ: 115/2020

ಪಿ.ಡಬ್ಲ್ಯು:-1

**ಸಾಕ್ಷಿಯನ್ನು ಕರೆಯಿಸಿ ಸತ್ಯ ಭೋದನೆ ಮಾಡಿ ಪ್ರಮಾಣೀಕರಿಸಿದ ದಿನಾಂಕ** 03.03.2025

**ಮುಖ್ಯ ವಿಚಾರಣೆ : ಶ್ರೀ ಎಂ.ಕೆ.ಎ. ವಾದಿ ಪರ ವಕೀಲರಿಂದ**

ನನ್ನ ಮುಖ್ಯ ವಿಚಾರಣೆ ಭಾಗವಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ. ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ದಿನಾಂಕ 08.01.2015ರ ನೋಂದಾಯಿತ ದಾನಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸುತ್ತಿದ್ದೇನೆ, ಅದನ್ನು **ನಿಪಿ-1** ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-1 ಪತ್ರವನ್ನು ತನ್ನ ತಂದೆಯು ತನ್ನ ಎಡಗೈ ಹೆಬ್ಬೆಟ್ಟಿನ ಗುರುತು ಹಾಕುವ ಮೂಲಕ ಬರೆದುಕೊಟ್ಟಿದ್ದಾರೆ ಎಂದು ನುಡಿಯುತ್ತಾರೆ.

ನಾನು ಒಂದು ಕಂದಾಯ ರಶೀದಿಯನ್ನು ಹಾಜರುಪಡಿಸುತ್ತಿದ್ದೇನೆ, ಅದನ್ನು **ನಿಪಿ-2** ಎಂದು ಗುರುತಿಸಲಾಯಿತು.

ನಾನು ಹೌಸ್ ಲಿಸ್ಟ್ ಸಂಖ್ಯೆ 22 ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸುತ್ತಿದ್ದೇನೆ, ಅದನ್ನು **ನಿಪಿ-3** ಎಂದು ಗುರುತಿಸಲಾಯಿತು.

ಆದುದರಿಂದ, ದಾವೆಯನ್ನು ನನ್ನ ಪರವಾಗಿ ಡಿಕ್ರಿಗೊಳಿಸಬೇಕೆಂದು ಪ್ರಾರ್ಥಿಸುತ್ತೇನೆ.

(**ಪಾಟೀ ಸವಾಲು ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**)

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇದೆ

ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಬಾಗೇಪಲ್ಲಿ.